247

ಕರ್ನಾಟಕ ಸರ್ಕಾರ

ವಿಷಯಃ- ಬೀದರ್ ಜಿಲ್ಲೆ, ಚಿಟಗುಪ್ಪ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆ (ಪ-1) ಗೆ ಸರ್ಕಾರದ **ಅಂತಿಮ ಅನುಮೋದನೆ** ನೀಡುವ ಸಂಬಂಧ.

ಓದಲಾಗಿದೆ:-

1) ಸರ್ಕಾರದ ಆದೇಶ ಸಂಖ್ಯೆ:ನಅಇ:131:ಗುಅಪ್ರಾ:2010, ದಿನಾಂಕ:15-02-2011
2) ಸದಸ್ಯ ಕಾರ್ಯದರ್ಶಿ/ಮುಖ್ಯಾಧಿಕಾರಿಗಳು ಪುರಸಭೆ ಯೋಜನಾ ಪ್ರಾಧಿಕಾರ ಚಿಟಗುಪ್ಪ ಇವರ ಪತ್ರ ಸಂಖ್ಯೆ:ಪು.ಯೋ.ಪ್ರಾ.ಚಿ.ಮಹಾಯೋಜನೆ:ಪ-1:2011-12, ದಿನಾಂಕ:22.02.2015.
3) ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಏಕ ಕಡತ ಸಂಖ್ಯೆ: ನಯೋ/ಉನಿ(ಯೋವಿ)/ಚಿಟಗುಪ್ಪ/ಮಾ.ಪ್ಲಾ/2010-11 ರಲ್ಲಿ ನೀಡಿರುವ ಅಭಿಪ್ರಾಯ ದಿನಾಂಕ:31.03.2015.

*******

**ಪ್ರಸ್ತಾವನೆ:**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ಚಿಟಗುಪ್ಪ ಪಟ್ಟಣ ಸ್ಥಳೀಯ ಯೋಜನಾ ಪ್ರದೇಶದ ಮಹಾ ಯೋಜನೆಗೆ ತಾತ್ಕಾಲಿಕ ಅನುಮೋದನೆ ನೀಡಲಾಗಿದೆ. ಮೇಲೆ ಓದಲಾದ (2)ರ ಪತ್ರದಲ್ಲಿ ಚಿಟಗುಪ್ಪ ಪುರಸಭೆ ಯೋಜನಾ ಪ್ರಾಧಿಕಾರವು, ಚಿಟಗುಪ್ಪ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ತಯಾರಿಸಿರುವ ಮಹಾ ಯೋಜನೆ ಕುರಿತು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(1)(2) ರನ್ವಯ ಅಗತ್ಯ ಕ್ರಮ ಜರುಗಿಸಿ ಮಹಾ ಯೋಜನೆಯ ನಕ್ಷೆಗಳನ್ನು ಹಾಗೂ ವರದಿಯನ್ನು ತಯಾರಿಸಿ ಅಂತಿಮ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (3)ರಲ್ಲಿ, ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿಯ ಕಡತದಲ್ಲಿ, ಚಿಟಗುಪ್ಪ ಪಟ್ಟಣದ ಜನಸಂಖ್ಯೆಯು 2021ರಲ್ಲಿ 40,000 ಗಳಷ್ಟು ಬೆಳವಣಿಗೆಯಾಗುವುದಾಗಿ ಅಂದಾಜಿಸಿ ಮಹಾ ಯೋಜನೆಯನ್ನು ತಯಾರಿಸಲಾಗಿದೆ. ಚಿಟಗುಪ್ಪ ನಗರದ ಸ್ಥಳೀಯ ಯೋಜನಾ ಪ್ರದೇಶದ ಒಟ್ಟು 2646 ಹೆಕ್ಟೇರ್ ಪ್ರದೇಶವನ್ನು ನಗರದ ಅಭಿವೃದ್ಧಿಗಾಗಿ ನಗರೀಕರಣದ ಎಲ್ಲೆಯೆಂದು ಪ್ರಸ್ತಾಪಿಸಿ ಮಹಾಯೋಜನೆಯನ್ನು ರೂಪಿಸಲಾಗಿದೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಕಲಂ (12)ರಲ್ಲಿ ನಿಗದಿಪಡಿಸಿರುವ ಅಂಶಗಳನ್ನು ಪರಿಗಣಿಸಿ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ ಪ್ರದೇಶ 543.45 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 312.00 ಹೆಕ್ಟೇರ್ (ಶೇ.57.41), ವಾಣಿಜ್ಯಕ್ಕಾಗಿ 21.79 ಹೆಕ್ಟೇರ್ (ಶೇ.4.0), ಕೈಗಾರಿಕೆಗಾಗಿ 3.79 ಹೆಕ್ಟೇರ್, (ಶೇ.0.7), ಸಾರ್ವಜನಿಕ ಅರೆ ಸಾರ್ವಜನಿಕ ಉಪಯೋಗಕ್ಕೆ 37.31 ಹೆಕ್ಟೇರ್, (ಶೇ.6.86) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 45.72 ಹೆಕ್ಟೇರ್ (ಶೇ.8.41) ಹಾಗೂ ಸಾರಿಗೆ/ ಸಂಪರ್ಕ ವಲಯಕ್ಕೆ 121.26 ಹೆಕ್ಟೇರ್ (ಶೇಕಡ 22.32), ನಾಗರೀಕ ಸೌಲಭ್ಯಕ್ಕಾಗಿ 1.58 ಹೆಕ್ಟೇರ್ (ಶೇ.0.3) ಪ್ರದೇಶವನ್ನು ನಿಗಧಿಪಡಿಸಲಾಗಿದೆ. ಮಹಾ ಯೋಜನೆಯನ್ನು ಅನುಷ್ಠಾನಕ್ಕೆ ತರಲು ಅಗತ್ಯವಿರುವ ವಲಯ ನಿಯಮಾವಳಿಗಳನ್ನು ರೂಪಿಸಲಾಗಿದ್ದು, ಸದರಿ ಮಹಾ ಯೋಜನೆಗೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 13(3) ರನ್ವಯ **ಅಂತಿಮ ಅನುಮೋದನೆ ನೀಡಲು ಶಿಫಾರಸ್ಸು ಮಾಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ**. ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಈ ಕೆಳಕಂಡ ಆದೇಶವನ್ನು ಹೊರಡಿಸಲು ತೀಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಕಛೇರಿ ಬೆಂಗಳೂರು
ಕ್ರಮ ಸಂಖ್ಯೆ: 474
ದಿನಾಂಕ: 19/10/15

...2

**ಸರ್ಕಾರದ ಆದೇಶ ಸಂಖ್ಯೆ:. ನಅಇ 86 ಗುಅಪ್ರಾ 2015, ದಿನಾಂಕ. 17.10.2015**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಬೀದರ್ ಜಿಲ್ಲೆ, ಚಿಟಗುಪ್ಪ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ರೂಪಿಸಿರುವ ಮಹಾಯೋಜನೆ (ಪ-1)ಗೆ ನಗರದ ಮುಂದಿನ ಯೋಜಿತ ಬೆಳವಣಿಗೆಗೆ ಪ್ರಸ್ತಾಪಿಸಿರುವ 543.45 ಹೆಕ್ಟೇರ್ ಪ್ರದೇಶದಲ್ಲಿ ವಸತಿಗಾಗಿ 312.00 ಹೆಕ್ಟೇರ್ (ಶೇ.57.41), ವಾಣಿಜ್ಯಕ್ಕಾಗಿ 21.79 ಹೆಕ್ಟೇರ್ (ಶೇ.4.0), ಕೈಗಾರಿಕೆಗಾಗಿ 3.79 ಹೆಕ್ಟೇರ್, (ಶೇ.0.7), ಸಾರ್ವಜನಿಕ / ಅರೆ ಸಾರ್ವಜನಿಕ ಉಪಯೋಗಕ್ಕೆ 37.31 ಹೆಕ್ಟೇರ್, (ಶೇ.6.86) ಉದ್ಯಾನವನ ಮತ್ತು ಬಯಲು ಜಾಗಕ್ಕಾಗಿ 45.72 ಹೆಕ್ಟೇರ್ (ಶೇ.8.41) ಹಾಗೂ ಸಾರಿಗೆ / ಸಂಪರ್ಕ ವಲಯಕ್ಕೆ 121.26 ಹೆಕ್ಟೇರ್ (ಶೇಕಡ 22.32), ನಾಗರೀಕ ಸೌಲಭ್ಯಕ್ಕಾಗಿ 1.58 ಹೆಕ್ಟೇರ್ (ಶೇ.0.3) ಪ್ರದೇಶವನ್ನು ನಿಗಧಿಪಡಿಸಿ ಈ ಕೆಳಕಂಡ ಷರತ್ತಿಗೊಳಪಟ್ಟು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961ರ ಪ್ರಕರಣ 13(3)ರನ್ವಯ ಸರ್ಕಾರದ **ಅಂತಿಮ ಅನುಮೋದನೆಯನ್ನು ನೀಡಲಾಗಿದೆ.** ಮಹಾ ಯೋಜನೆ (ಪ-1)ಗೆ ಅಂತಿಮ ಅನುಮೋದನೆ ನೀಡಿದ ಗುರುತಾಗಿ ವರದಿ ಹಾಗೂ ನಕ್ಷೆಗಳ ಮೇಲೆ ಸರ್ಕಾರದ ಮುದ್ರೆಯನ್ನು ಹಾಕಲಾಗಿದೆ.

ಷರತ್ತು:

1) ಈ ಆದೇಶದ ದಿನಾಂಕದಿಂದ ಎರಡು ವರ್ಷಗಳವರೆಗೆ ಪ್ರಾಧಿಕಾರವು ಯಾವುದೇ ಭೂ ಉಪಯೋಗ ಬದಲಾವಣೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಕೂಡದು.
2) ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961ರ ಕಲಂ 69(1) ರ ಪ್ರಕಾರ 5 ವರ್ಷಗಳ ಒಳಗೆ ಉದ್ಯಾನವನ, ಬಯಲು ಜಾಗ, ಆಟದ ಮೈದಾನ ಮತ್ತು ಸಾರ್ವಜನಿಕ/ಅರೆ ಸಾರ್ವಜನಿಕ ಉಪಯೋಗಕ್ಕೆ ಮೀಸಲಿಟ್ಟ ಜಮೀನುಗಳನ್ನು ನಿಯಮಾನುಸಾರ ಭೂ ಸ್ವಾಧೀನ ಪಡಿಸಿಕೊಳ್ಳಲು ಕ್ರಮ ಜರುಗಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ
17/10/15
(ವಿ. ರಾಜೇಂದ್ರ)
ಸರ್ಕಾರದ ಅಧೀನ ಕಾರ್ಯದರ್ಶಿ
ನಗರಾಭಿವೃದ್ಧಿ ಇಲಾಖೆ.
17/10

**ಇವರಿಗೆ:**

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಸದರಿ ಆದೇಶವನ್ನು ರಾಜ್ಯ ಪತ್ರದಲ್ಲಿ ಪ್ರಕಟಿಸಿ ಅದರ ಪ್ರಕಟಿತ ಅಧಿಸೂಚನೆಯ 150 ಪ್ರತಿಗಳನ್ನು ಸರ್ಕಾರಕ್ಕೆ ಕಳುಹಿಸುವಂತೆ ಕೋರಲಾಗಿದೆ.

ಪ್ರತಿಯನ್ನು:

1) ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
2) ಸದಸ್ಯ-ಕಾರ್ಯದರ್ಶಿಗಳು/ಮುಖ್ಯಾಧಿಕಾರಿಗಳು, ಚಿಟಗುಪ್ಪ ಪುರಸಭಾ ಯೋಜನಾ ಪ್ರಾಧಿಕಾರ, ಚಿಟಗುಪ್ಪ ಇವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
3) ನಗರ ಮತ್ತು ಗ್ರಾಮಾಂತರ ಯೋಜನಾ ಸಹಾಯಕ ನಿರ್ದೇಶಕರು, ಬೀದರ್ ಇವರಿಗೆ ಮಾಹಿತಿಗಾಗಿ ಕಳುಹಿಸಿದೆ.
4) ಮಾನ್ಯ ನಗರಾಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸಸೌಧ, ಬೆಂಗಳೂರು.
5) ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ,
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.